**Bangalore**
**Regional News**
**29.07.2024 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಕೆ.ಆರ್.ಎಸ್ ಜಲಾಶಯಕ್ಕೆ ಬಾಗಿನ ಅರ್ಪಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಶಿರೂರು ಗುಡ್ಡ ಕುಸಿತ ಪ್ರಕರಣ; ಕೆಲ ದಿನಗಳ ಕಾರ್ಯಾಚರಣೆ ಸ್ಥಗಿತ - ಸಚಿವ ಮಂಕಾಳ ವೈದ್ಯ

೩. ಇಂದು ವಿಶ್ವ ಹುಲಿ ದಿನ; ಹುಲಿಗಳ ಸಂಖ್ಯೆಯಲ್ಲಿ ರಾಜ್ಯಕ್ಕೆ ಅಗ್ರ ಸ್ಥಾನ

೪. ಪ್ಯಾರಿಸ್ ಒಲಿಂಪಿಕ್ಸ್; ೧೦ ಮೀಟರ್ ಏರ್ ರೈಫಲ್ ಪುರುಷರ ಫೈನಲ್‌ನಲ್ಲಿ ಅರ್ಜುನ್ ಬುಬುಟಾ ಪದಕಕ್ಕೆ ಸೆಣಸಾಟ

**<><*<><>*><>**

ಮಂಡ್ಯದಲ್ಲಿಂದು ಕೆ.ಆರ್.ಎಸ್ ಜಲಾಶಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಾಗೀನ ಸಮರ್ಪಿಸಿದರು. ಕನ್ನಂಬಾಡಿ ಆಣೆಕಟ್ಟು ಸಂಪೂರ್ಣ ಭರ್ತಿಯಾದ ಹಿನ್ನೆಲೆಯಲ್ಲಿ ಕ್ಷೀರಾಭಿಷೇಕ ಹಾಗೂ ಪುಷ್ಪಾಭಿಷೇಕದ ಬಳಿಕ ಪೂಜೆ ಸಲ್ಲಿಸಿದರು. ಇಂದು ಮಧ್ಯಾಹ್ನ ೩ ಗಂಟೆಗೆ ಮೈಸೂರು ಜಿಲ್ಲೆ ಸೇರಿದಂತೆ ಲಕ್ಷಾಂತರ ಜನರ ಜೀವನಾಡಿಯಾಗಿರುವ ಕಬಿನಿ ಜಲಾಶಯ ಮೈದುಂಬಿ ಕಂಗೊಳಿಸುತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದು ಜಲಾಶಯಕ್ಕೆ ಬಾಗಿನ ಅರ್ಪಿಸಲಿದ್ದಾರೆ. ಕರ್ನಾಟಕ ಸರ್ಕಾರ, ಜಲಸಂಪನ್ಮೂಲ ಇಲಾಖೆ ಹಾಗೂ ಕಾವೇರಿ ನೀರಾವರಿ ನಿಗಮ ನಿಯಮಿತ ವತಿಯಿಂದ ಹೆಚ್.ಡಿ.ಕೋಟೆ ತಾಲ್ಲೂಕಿನ ಬೀಚನಹಳ್ಳಿಯ "ಕಬಿನಿ ಜಲಾಶಯಕ್ಕೆ ಬಾಗಿನ ಅರ್ಪಣೆ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಮತ್ತು ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್, ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಚಿವ ಡಾ. ಎಚ್.ಸಿ.ಮಹದೇವಪ್ಪ, ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಮತ್ತಿತರರು ಉಪಸ್ಥಿತರಿರಲಿದ್ದಾರೆ.

<><*<><>*><>

ಕಾರವಾರದ ಶಿರೂರು ರಾಷ್ಟ್ರೀಯ ಹೆದ್ದಾರಿ ಬಳಿಯ ಗಂಗಾವಳಿ ನದಿಯಲ್ಲಿ ನೀರಿನ ಸೆಳೆತ ಹೆಚ್ಚಾಗಿರುವುದರಿಂದ ನಾಪತ್ತೆಯಾಗಿರುವ ಮೂವರ ಶೋಧ ಕಾರ್ಯ ಸಾಧ್ಯವಾಗುತ್ತಿಲ್ಲ ಎಂದು ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳು ವೈದ್ಯ ಸ್ಪಷ್ಟಪಡಿಸಿದ್ದಾರೆ. ಶಿರೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭೂಸೇನೆ, ನೇವಿ, ಎನ್.ಡಿ.ಆರ್.ಎಫ್ ಹಾಗೂ ಎಸ್.ಡಿ.ಆರ್.ಎಫ್ ತಂಡಗಳು ಸತತವಾಗಿ ೧೩ ದಿನ ಪ್ರಯತ್ನಿಸಿದರೂ ಕಾಣೆಯಾದ ಮೂವರು ಪತ್ತೆಯಾಗಿಲ್ಲ. ನದಿ ನೀರಿನ ಹರಿವಿನ ವೇಗ ಕಡಿಮೆಯಾದ ತಕ್ಷಣ, ಪುನಃ ರಕ್ಷಣಾ ಕಾರ್ಯಾಚರಣೆ ಆರಂಭವಾಗಲಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಇಂದು ಅಂತಾರಾಷ್ಟ್ರೀಯ ಹುಲಿ ದಿನಾಚರಣೆ. ಹುಲಿ ಸಂತತಿ ರಕ್ಷಣೆ ಸಂದೇಶ ಸಾರುವ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಹುಲಿಗಳ ನೈಸರ್ಗಿಕ ಆವಾಸಸ್ಥಾನಗಳನ್ನು ರಕ್ಷಿಸಲು ಹುಲಿ ಸಂರಕ್ಷಣೆಯ ಬಗ್ಗೆ ಜಾಗೃತಿ ಮತ್ತು ಬೆಂಬಲವನ್ನು ಹೆಚ್ಚಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. ಹುಲಿಗಳ ಸಂಖ್ಯೆ ಹೆಚ್ಚಾಗುವುದರಿಂದ ಅರಣ್ಯದ ರಕ್ಷಣೆಗೂ ಸಹಕಾರಿಯಾಗಲಿದೆ. ಕಾಡುಗಳ ಸಂರಕ್ಷಣೆಯಿಂದ ಪ್ರಕೃತಿಯ ಸೌಂದರ್ಯವೂ ಹೆಚ್ಚಾಗಿ ಕಾಲಕಾಲಕ್ಕೆ ಮಳೆ-ಬೆಳೆಯಾಗಲು ನೆರವಾಗಲಿದೆ. ವಿಶ್ವ ವನ್ಯಜೀವಿ ನಿಧಿಯ ಪ್ರಕಾರ, ಭಾರತದಲ್ಲಿ ಪ್ರಸ್ತುತ ಹುಲಿಗಳ ಸಂಖ್ಯೆ ಸ್ಥಿರವಾಗಿದ್ದು, ಹುಲಿ ಮೀಸಲು ಅರಣ್ಯಗಳನ್ನು ೧೯೭೩ ರಲ್ಲಿ ಭಾರತದಲ್ಲಿ ಸ್ಥಾಪಿಸಲಾಗಿದ್ದು, ಪ್ರಾಜೆಕ್ಟ್ ಟೈಗರ್ ನಿಂದ ನಿಯಂತ್ರಿಸಲ್ಪಡುತ್ತದೆ, ಪ್ರಪಂಚದಲ್ಲಿ ಶೇಕಡ ೮೦ರಷ್ಟು ಹುಲಿಗಳು ಭಾರತದಲ್ಲಿದ್ದು, ಅದರಲ್ಲಿ ಅತೀ ಹೆಚ್ಚು ಹುಲಿಗಳ ಸಂಖ್ಯೆಯಲ್ಲಿ ಕರ್ನಾಟಕ ರಾಜ್ಯ ಮೊದಲ ಸ್ಥಾನದಲ್ಲಿದೆ.

<><*<><>*><>

ಗ್ರಾಮೀಣ ಸಂಪರ್ಕವನ್ನು ಬಲಪಡಿಸಲು ಮತ್ತು ಕರ್ನಾಟಕದ ಆರ್ಥಿಕ ಬೆಳವಣಿಗೆ ಗ್ರಾಮೀಣಾಭಿವೃದ್ಧಿ ಸಚಿವಾಲಯ ಪಿಎಂ-ಜನ್‌ಮನ್ ಅಡಿಯಲ್ಲಿ ೨೩.೭೬೬ ಕಿಲೋಮೀಟರ್ ಅಳತೆಯ ೧೮ ರಸ್ತೆಗಳು ಮತ್ತು ೨ ಸೇತುವೆಗಳ ನಿರ್ಮಾಣಕ್ಕಾಗಿ ರಾಜ್ಯಕ್ಕೆ ಸುಮಾರು ೨೫ ಕೋಟಿ ರೂಪಾಯಿ ಮಂಜೂರಾಗಿದೆ ಎಂದು ಸಚಿವಾಲಯದ ಪ್ರಕಟಣೆ ತಿಳಿಸಿದೆ. ಗ್ರಾಮೀಣ ಪ್ರದೇಶಗಳಲ್ಲಿ ಸಂಪರ್ಕವನ್ನು ಹೆಚ್ಚಿಸುವ ಮೂಲಕ, ದೂರದ ಹಳ್ಳಿಗಳು ಮತ್ತು ನಗರ ಕೇಂದ್ರಗಳ ನಡುವಿನ ಅಂತರವನ್ನು ಕಡಿಮೆ ಮಾಡುವ ಮೂಲಕ ದುರ್ಬಲ ಬುಡಕಟ್ಟು ಕುಟುಂಬಗಳಿಗೆ ವಸತಿಗಳನ್ನು ನೀಡಿ ಸಾಮಾಜಿಕ-ಆರ್ಥಿಕ ಪರಿಸ್ಥಿತಿಗಳನ್ನು ಸುಧಾರಿಸಲು ಸಹಕಾರಿಯಾಗಲಿದೆ.

<><*<><>*><>

ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ, ಕಡಗರವಳ್ಳಿ-ಎಡಕುಮೇರಿ ಬಳಿ ಕಳೆದ ನಾಲ್ಕು ದಿನಗಳ ಹಿಂದೆ ಸಂಭವಿಸಿದ ರೈಲ್ವೆ ಹಳಿ ಮೇಲೆ ಗುಡ್ಡ ಕುಸಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಮಣ್ಣು ತೆರವು ಕಾರ್ಯಾಚರಣೆ ಮುಂದುವರೆದಿದೆ. ಬಾರಿ ಮಳೆಯ ನಡುವೆಯೂ ನಡೆಯುತ್ತಿರುವ ಕಾರ್ಯಾಚರಣೆಯಲ್ಲಿ ಸುಮಾರು ೪೨೦ಕ್ಕೂ ಹೆಚ್ಚು ಕಾರ್ಮಿಕರಿಂದ ಗುಡ್ಡ ತೆರವು ಕಾರ್ಯಾಚರಣೆ ನಡೆಯುತ್ತಿದೆ.  ರೈಲ್ವೆ ಹಳಿ ಮೇಲೆ ಗುಡ್ಡ ಕುಸಿದ ಹಿನ್ನೆಲೆಯಲ್ಲಿ ಹದಿನೈದು ದಿನಗಳ ಕಾಲ ಸಕಲೇಶಪುರ-ಸುಬ್ರಹ್ಮಣ್ಯ ರೈಲು ಮಾರ್ಗ ಬಂದ್ ಮಾಡಲಾಗಿದ್ದು, ರೈಲ್ವೆ ಇಲಾಖೆ ಅಧಿಕಾರಿಗಳು ಸ್ಥಳದಲ್ಲೇ ಮೊಕ್ಕಾಂ ಹೂಡಿ ಮಣ್ಣು ತೆರವು ಕಾರ್ಯಚರಣೆಯಲ್ಲಿ ಪಾಲ್ಗೊಂಡಿದ್ದಾರೆ.

<><*<><>*><>

ತುಂಗಭದ್ರಾ ನದಿಯಲ್ಲಿ ನೀರಿನ ಹರಿವು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಹೊನ್ನಾಳಿ ಪಟ್ಟಣದ ಬಾಲರಾಜ್ ಘಾಟ್‌ನ ೧೧ ಕುಟುಂಬಗಳ ೬೪ ಜನರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಈಗಾಗಲೇ ತುಂಗಾ ಜಲಾಶಯದಿಂದ ನದಿಗೆ ೭೪ ಸಾವಿರ ಕ್ಯೂಸೆಕ್ ನೀರು ಹರಿಬಿಡಲಾಗಿದ್ದು, ಭದ್ರಾ ಜಲಾಶಯದಿಂದ ಕೂಡ ಯಾವುದೇ ಕ್ಷಣದಲ್ಲಾದರೂ ಹೆಚ್ಚುವರಿ ನೀರನ್ನು ಹರಿಬಿಡುವ ಸಂಭವವಿದ್ದು, ನದಿ ಪಾತ್ರದ ಜನರು ಎಚ್ಚರಿಕೆ ವಹಿಸಲು ಜಿಲ್ಲಾಧಿಕಾರಿ ಸೂಚಿಸಿದ್ದಾರೆ.  ನದಿ ಪಾತ್ರದಲ್ಲಿನ ಎಲ್ಲಾ ಗ್ರಾಮಗಳಲ್ಲಿ ಜನ, ಜಾನುವಾರುಗಳನ್ನು ನದಿಗೆ ಇಳಿಯದಂತೆ ಎಚ್ಚರ ವಹಿಸಲು ಜಾಗೃತಿ ಮೂಡಿಸಲಾಗಿದೆ. ಪ್ರವಾಹ ಪರಿಸ್ಥಿತಿ ಎದುರಿಸಲು ಗ್ರಾಮ ಮಟ್ಟದ ಟಾಸ್ಕ್‌ಫೋರ್ಸ್ ಸಮಿತಿ ರಚಿಸಲಾಗಿದ್ದು, ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಮತ್ತು ತುರ್ತು ನಿಗಾ ಘಟಕಗಳನ್ನು ಸನ್ನದ್ಧವಾಗಿಡಲಾಗಿದೆ. ಮತ್ತು ಅಧಿಕಾರಿಗಳು ಈ ಬಗ್ಗೆ ಮುನ್ನೆಚ್ಚರಿಕೆ ಕ್ರಮ ವಹಿಸಲು ಸೂಚನೆ ನೀಡಲಾಗಿದೆ.

<><*<><>*><>

ಹಾವೇರಿ ಜಿಲ್ಲೆ ರಟ್ಟೀಹಳ್ಳಿ ತಾಲ್ಲೂಕಿನ ಕುಮದ್ವತಿ ನದಿಗೆ ಅಡ್ಡಲಾಗಿ ನೂತನವಾಗಿ ರಾಷ್ಟ್ರೀಯ ಹೆದ್ದಾರಿ ವಿಭಾಗದಿಂದ ೨೫ ಕೋಟಿ ರೂಪಾಯಿ ವೆಚ್ಚದಲ್ಲಿ ಬೃಹತ್ ಸೇತುವೆ ಮತ್ತು ರಸ್ತೆ ಕಾಮಗಾರಿ ಮುಕ್ತಾಯವಾಗಿದ್ದು, ಸಂಚಾರಕ್ಕೆ ಅನುಕೂಲವಾಗಿದೆ ಎಂದು ಮಾಜಿ ಸಚಿವ ಬಿ.ಸಿ.ಪಾಟೀಲ್ ಹೇಳಿದ್ದಾರೆ. ನೂತನ ಸೇತುವೆಯನ್ನು ವೀಕ್ಷಿಸಿ ಮಾತನಾಡಿದ ಅವರು, ಪ್ರತಿ ವರ್ಷ ಮಳೆಗಾಲದಲ್ಲಿ ಈ ಸೇತುವೆ ಮುಳಗಡೆಯಾಗಿ ಸಾರ್ವಜನಿಕ ಸಂಚಾರ ಸ್ಥಗಿತಗೊಳ್ಳುತ್ತಿತ್ತು. ಈ ಬಗ್ಗೆ ಶಿವಮೊಗ್ಗ ಸಂಸದ ಬಿ.ವೈ.ರಾಘವೇಂದ್ರ ಅವರೊಂದಿಗೆ ಚರ್ಚಿಸಿ, ಸೇತುವೆ ಮತ್ತು ರಸ್ತೆ ನಿರ್ಮಿಸಲಾಗಿದೆ.

ಪ್ರಸ್ತುತ ಕುಮದ್ವತಿ ನದಿಯಲ್ಲಿ ಎಷ್ಟೇ ಪ್ರವಾಹ ಇದ್ದರೂ ಸೇತುವೆಯ ಮೇಲೆ ವಾಹನ ಸಂಚಾರ ಸುಗಮವಾಗಲಿದೆ ಎಂದರು.

<><*<><>*><>

ದೇಶದ ಸರ್ವೋಚ್ಚ ನ್ಯಾಯಾಲಯ ಸುಪ್ರೀಂ ಕೋರ್ಟ್ ತನ್ನ ೭೫ನೇ ವಾರ್ಷಿಕೋತ್ಸವದ ಸ್ಮರಣಾರ್ಥ ಇಂದಿನಿಂದ ವಿಶೇಷ ಲೋಕ ಅದಾಲತ್ ಸಪ್ತಾಹ ಆಯೋಜಿಸಲಿದೆ. ಈ ಸಂಬಂಧ ಆಕಾಶವಾಣಿ ಸುದ್ದಿ ವಿಭಾಗದೊಂದಿಗೆ ಪ್ರತ್ಯೇಕವಾಗಿ ಮಾತನಾಡಿದ ನ್ಯಾಯಮೂರ್ತಿ ಕೆ.ವಿ.ವಿಶ್ವನಾಥನ್, ಈ ಉಪಕ್ರಮವು ಸುಪ್ರೀಂ ಕೋರ್ಟ್ ನಲ್ಲಿ ಬಾಕಿ ಇರುವ ಪ್ರಕರಣಗಳನ್ನು ಪರಿಹರಿಸುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು. ಲೋಕ ಅದಾಲತ್ ಅಥವಾ ಜನತಾ ನ್ಯಾಯಾಲಯದ ಲಾಭವನ್ನು ಪಡೆದುಕೊಳ್ಳುವಂತೆ ಅವರು ಕಕ್ಷಿದಾರರನ್ನು ಪ್ರೋತ್ಸಾಹಿಸಿದ್ದಾರೆ. ಈ ಉಪಕ್ರಮವು ವಿವಾದಗಳನ್ನು ಸ್ವಯಂಪ್ರೇರಿತವಾಗಿ ಮತ್ತು ಸೌಹಾರ್ದಯುತವಾಗಿ ಪರಿಹರಿಸುವ ವೇದಿಕೆಯಾಗಿದೆ ಎಂದು ಅವರು ಬಣ್ಣಿಸಿದರು.

<><*<><>*><>

ರೇಷ್ಮೆ ಕೃಷಿ ಒಂದು ಪ್ರಮುಖ ಗುಡಿ ಕೈಗಾರಿಕೆ, ರೇಷ್ಮೆ ಕೃಷಿ ಅನೇಕ ರೈತರಿಗೆ, ಕೃಷಿ ಕಾರ್ಮಿಕರಿಗೆ ಉದ್ಯೋಗ ಒದಗಿಸುವಲ್ಲಿ ಮಹತ್ತರ ಪಾತ್ರ ವಹಿಸಿದೆ. ಕಡಿಮೆ ಬಂಡವಾಳದಲ್ಲಿ ಹೆಚ್ಚಿನ ಲಾಭ ನೀಡುವ ಬೆಳೆ ಎಂದು ರೇಷ್ಮೆ ಇಲಾಖೆ ಉಪನಿರ್ದೇಶಕ ಎಸ್.ಎನ್.ಶ್ರೀನಿವಾಸ್ ಹೇಳಿದ್ದಾರೆ. ಕೋಲಾರ ಜಿಲ್ಲೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಬೈವೋಲ್ಟಿನ್ ರೇಷ್ಮೆ ತಳಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಉತ್ತಮ ಬೆಲೆಗೆ ಮಾರಾಟವಾಗುತ್ತಿದ್ದು, ಇದನ್ನು ಹೆಚ್ಚು ಬೆಳೆಯಬೇಕು. ಇದರಿಂದ ರೈತರಿಗೆ ಉತ್ತಮ ಬೆಲೆ ದೊರೆಯುತ್ತದೆ. ರಾಸಾಯನಿಕ ಗೊಬ್ಬರ ಕಡಿಮೆ ಮಾಡಿದರೆ ಸೊಪ್ಪಿನಲ್ಲಿ ಗುಣಮಟ್ಟ ಹೆಚ್ಚುತ್ತದೆ ಎಂದು ತಿಳಿಸಿದರು.

<><*<><>*><>

ಚಿಕ್ಕಬಳ್ಳಾಪುರ ನಗರ ಹೊರವಲಯದ ಚದಲಪುರ ಬಳಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ, ಯುವತಿಯರು ಹಾಗೂ ಮಹಿಳೆಯರು ಮತ್ತು ಪುರುಷರಿಗಾಗಿ ಕುರಿ ಸಾಕಾಣಿಕೆಯ ೧೦ ದಿನಗಳ ಉಚಿತ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ. ಇದೇ ೩೧ ರಿಂದ ಆರಂಭವಾಗಲಿರುವ ಕುರಿ ಸಾಕಾಣಿಕೆಯ ಉಚಿತ ತರಬೇತಿಗೆ ಅಗತ್ಯ ದಾಖಲೆಗಳೊಂದಿಗೆ ಅಂದೇ ನೇರವಾಗಿ ಹಾಜರಾಗಬಹುದು. ತರಬೇತಿ

ಅವಧಿಯಲ್ಲಿ ಉಚಿತ ಊಟ ಮತ್ತು ವಸತಿ ವ್ಯವಸ್ಥೆ ಇರುತ್ತದೆ. ೧೮ ರಿಂದ ೪೫ ವರ್ಷದೊಳಗಿನವರು ತರಬೇತಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ತರಬೇತಿ ಸಂಸ್ಥೆಯನ್ನು ನೇರವಾಗಿ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟದ ಮೂರನೇ ಸ್ಪರ್ಧಾ ದಿನವಾದ ಇಂದು ೧೦ ಮೀಟರ್ ಏರ್ ರೈಫಲ್‌ನ ಪುರುಷರ ವಿಭಾಗದ ಫೈನಲ್‌ನಲ್ಲಿ ಅರ್ಜುನ್ ಬಬುಟಾ ಮಧ್ಯಾಹ್ನ ೩:೩೦ ಕ್ಕೆ ಸ್ಪರ್ಧಿಸಲಿದ್ದಾರೆ.  ಪುರುಷರ ಹಾಕಿಯಲ್ಲಿ ಭಾರತ ಬಿ ಗುಂಪಿನ ತನ್ನ ದ್ವಿತೀಯ ಪಂದ್ಯದಲ್ಲಿ ಅರ್ಜೆಂಟೀನಾವನ್ನು ಎದುರಿಸಲಿದೆ. ಪಂದ್ಯ ಸಂಜೆ ೪:೧೫ ಕ್ಕೆ ಆರಂಭವಾಗಲಿದೆ. ನ್ಯೂಜಿಲೆಂಡ್ ವಿರುದ್ಧ ಪ್ರಮುಖ ಗೆಲುವು ದಾಖಲಿಸಿದ ನಂತರ ಪುರುಷರು ತಮ್ಮ ಗೆಲುವಿನ ಓಟವನ್ನು ಮುಂದುವರಿಸುವ ನಿರೀಕ್ಷೆಯಲ್ಲಿದ್ದಾರೆ. ಬ್ಯಾಡ್ಮಿಂಟನ್ ಪುರುಷರ ಸಿಂಗಲ್ಸ್ ಎಲ್ ಗುಂಪಿನಲ್ಲಿ ಭಾರತದ ಸ್ಟಾರ್ ಷಟ್ಲರ್ ಲಕ್ಷ್ಯ ಸೇನ್, ಬೆಲ್ಜಿಯಂನ ಜೂಲಿಯನ್ ಕ್ಯಾರಾಗಿ ಅವರನ್ನು ಸಂಜೆ ೫:೩೦ ಕ್ಕೆ ಎದುರಿಸಲಿದ್ದಾರೆ. ಇದಕ್ಕೂ ಮುನ್ನ ಪುರುಷರ ಡಬಲ್ಸ್ ಗುಂಪು ಹಂತದಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ, ಜರ್ಮನಿಯ ಮಾರ್ಕ್ ಮತ್ತು ಮಾರ್ವಿನ್ ಜೋಡಿಯನ್ನು ಎದುರಿಸಲಿದ್ದಾರೆ.ಮಹಿಳಾ ಡಬಲ್ಸ್ ಗ್ರೂಪ್ ಹಂತದಲ್ಲಿ ಭಾರತದ ಅಶ್ವಿನಿ ಪೊನ್ನಪ್ಪ ಮತ್ತು ತನಿಶಾ ಕ್ರಾಸ್ಟೊ ಅವರು ಜಪಾನಿನ ಚಿಹಾರು ಶಿಡಾ ಮತ್ತು ನಮಿ ಮತ್ಸುಯಾಮಾ ಅವರನ್ನು ಎದುರಿಸಲಿದ್ದಾರೆ. ಧೀರಜ್ ಬೊಮ್ಮದೇವರ, ತರುಣ್ ದೀಪ್ ಮತ್ತು ಪ್ರವೀಣ್ ರಮೇಶ್ ಜಾಧವ್ ಅವರನ್ನೊಳಗೊಂಡ ಭಾರತ ತಂಡ ಆರ್ಚರಿ ಪುರುಷರ ತಂಡ ಕ್ವಾರ್ಟರ್ ಫೈನಲ್ ನಲ್ಲಿಂದು ಸೆಣಸಲಿದೆ. ಟೇಬಲ್ ಟೆನಿಸ್ ಮಹಿಳಾ ಸಿಂಗಲ್ಸ್ ರೌಂಡ್ ೩೨ರಲ್ಲಿ ಭಾರತದ ಮಣಿಕಾ ಬಾತ್ರಾ ಅವರು. ಫ್ರೆಂಚ್ ಆಟಗಾರ್ತಿ ಪೃಥ್ವಿಕಾ ಪವಾಡೆ ಅವರನ್ನು ಎದುರಿಸಲಿದ್ದಾರೆ. ಪ್ಯಾರಿಸ್ ಕೂಟದಲ್ಲಿ ಭಾರತಕ್ಕೆ ಮೊದಲ ಪದಕ ಗೆದ್ದುಕೊಟ್ಟ ಶೂಟರ್ ಮನು ಭಾಕರ್‌ಗೆ ರಾಷ್ಟ್ರಪತಿ, ಪ್ರಧಾನಿ ಸೇರಿ ಹಲವು ಗಣ್ಯರಿಂದ ಶುಭಾಶಯಗಳ ಮಹಾಪೂರವೇ ಹರಿದು ಬಂದಿದೆ. ಕಳೆದ ರಾತ್ರಿ ನಡೆದ ಟೆನಿಸ್ ಡಬಲ್ಸ್ ವಿಭಾಗದ ಪುರುಷರ ಆರಂಭಿಕ ಸುತ್ತಿನಲ್ಲಿ ಭಾರತದ ರೋಹನ್ ಬೋಪಣ್ಣ ಮತ್ತು ಶ್ರೀರಾಮ್ ಬಾಲಾಜಿ ಪರಾಭವಗೊಂಡು ಹೋರಾಟ ಮುಗಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>